# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ

ಅಂಜನಾಪುರ ಉಪ ವಿಭಾಗ

2ನೇ ಮುಖ್ಯ ರಸ್ತೆ, 6ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು-560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ.ಆರ್/ /2022-23 ದಿನಾಂಕ :

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/35/2020-21 ದಿ:21.09.2020 ರವರ ಆದೇಶದಂತೆ ದಿ:23-06-2022 ರಂದು ವಾರ್ಡ್ ನಂ.195-ಕೋಣನಕುಂಟೆ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

### ಸಭೆಗೆ ಹಾಜರಾಗಿದ್ದವರ ಅಧಿಕಾರಿ/ಸಿಬ್ಬಂದಿಗಳ ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ಟಿ.ನಟರಾಜ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀ ಮಾರುತಿ.ಕೆ.ಎನ್ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀ ರಮೇಶ್.ಎಸ್.ಆರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಗೈರು ಹಾಜರಿರುತ್ತಾರೆ |
| 4 | ಶ್ರೀ ಮೋಹನ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 5 | ಶ್ರೀ ರಮೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) | ಗೈರು ಹಾಜರಿರುತ್ತಾರೆ |
| 6 | ಶ್ರೀ ಅಕ್ಷಯ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಹಾಜರಿರುತ್ತಾರೆ. |
| 8 | ಶ್ರೀ ರಾಮಚಂದ್ರ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಹಾಜರಿರುತ್ತಾರೆ. |
| 9 | ಶ್ರೀ ಜಗದೀಶ್ | ಬೀದಿ ದೀಪಗಳ ನಿರ್ವಹಣೆ | ಗೈರು ಹಾಜರಿರುತ್ತಾರೆ. |

### ಸಭೆಗೆ ಹಾಜರಾಗಿದ್ದವರ ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ/ಸಾರ್ವಜನಿಕರು ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ | ಹಾಜರಾತಿ |
|---|---|---|---|
| 1 | ಶ್ರೀ ರಾಮರಾವ್.ಕೆ.ಎಸ್ | ಶ್ರೇಯಸ್ ಕಾಲೋನಿ RWA | ಹಾಜರಿರುತ್ತಾರೆ. |
| 2 | ಶ್ರೀ ಸದಾಶಿವ | ಕೊತ್ತನೂರು ಗ್ರಾಮ RWA | ಹಾಜರಿರುತ್ತಾರೆ. |
| 3 | ಶ್ರೀ ಜಿ.ವಿ.ಹೆಬ್ಬಾರ್ | ಆರ್.ಬಿ.ಐ ಬಡಾವಣೆ RWA | ಹಾಜರಿರುತ್ತಾರೆ. |
| 4 | ಶ್ರೀ ವೆಂಕಟೇಶ್ | | ಹಾಜರಿರುತ್ತಾರೆ. |
| 5 | ಶ್ರೀ ಸೀನಾ ನಾಯಕ್ | | ಹಾಜರಿರುತ್ತಾರೆ. |
| 6 | ಶ್ರೀ ಅನಂತಪದ್ಮನಾಭ | | ಹಾಜರಿರುತ್ತಾರೆ. |

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕೋಣನಕುಂಟೆ ವಾರ್ಡ್ ಸಂಖ್ಯೆ.195ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಟಿ.ನಟರಾಜ ರವರು ದಿನಾಂಕ: 23-06-2022 ರಂದು ಗುರುವಾರ 11.30ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀ ಮಾರುತಿ.ಕೆ.ಎನ್ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಪು.ತಿ.ನೋ 2ಕ್ಕೆ

Scanned with CamScanner

1. <u>ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ)</u>

ವಾರ್ಡ್ ವ್ಯಾಪ್ತಿಯಲ್ಲಿ ಸಮರ್ಪಕವಾಗಿ ಘನತ್ಯಾಜ್ಯ ನಿರ್ವಹಣೆ ಮಾಡಲಾಗುತ್ತಿದ್ದು ನಿರ್ಧಿಷ್ಟವಾಗಿರುವುದಿಲ್ಲ ಹಾಗೂ ಕ್ರಿಮಿನಾಶಕ ಔಷಧಿಯನ್ನು ಸಿಂಪಡಣೆ ಮಾಡುವ ಕಾರ್ಯಕ್ರಮ ಕೈಗೊಳ್ಳಲಾಗುತ್ತಿದ್ದು ಇದರ ಬಗ್ಗೆ ಪ್ರಶಂಸೆ ವ್ಯಕ್ತ ಪಡಿಸಿದರು ಹಾಗೂ ಘನತ್ಯಾಜ್ಯ ಕಾರ್ಯ ಸಿಬ್ಬಂದಿಯ ಕೊರತೆ ಇರುವ ಬಗ್ಗೆ ತಿಳಿಸಲಾಗಿರುತ್ತದೆ.

ಈ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ಬೊಮ್ಮನಹಳ್ಳಿ ವಲಯ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

2. <u>ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ)</u>

ವಾರ್ಡ್ ವ್ಯಾಪ್ತಿಯಲ್ಲಿನ ಶ್ರೇಯಸ್ ಕಾಲೋನಿಯ 9, 10 ಮತ್ತು 11ನೇ ಅಡ್ಡ ರಸ್ತೆಗಳಲ್ಲಿ ಒಳಚರಂಡಿ ಸರಿಯಾಗಿ ನಿರ್ವಹಣೆಯಾಗುತ್ತಿಲ್ಲ ಹಾಗೂ ಆರ್.ಬಿ.ಐ ಬಡಾವಣೆಯ 2ನೇ ಮತ್ತು 3ನೇ ಮೇನ್‌ಗಳಲ್ಲಿ ನೀರು ಸರ್ಮಪಕವಾಗಿ ಹರಿಯದೇ ಇರುವುದು ಮತ್ತು ನವೋದಯನಗರ ಆಕ್ಸಿಸ್ ಅಪಾರ್ಟ್‌ಮೆಂಟ್ ತ್ಯಾಜ್ಯ ನೀರನ್ನು ರಸ್ತೆ ಚರಂಡಿಗೆ ಬಟ್ಟಿರುವುದು ತಿಳಿಸಿರುತ್ತಾರೆ.

ಮೇಲ್ಕಂಡ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

<u>3. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬೆಸ್ಕಾಂ) ಬೊಮ್ಮನಹಳ್ಳಿ ವಲಯ</u>

ವಾರ್ಡ್ ಸುತ್ತ ಮುತ್ತಲಿನ ಪ್ರದೇಶದ ವಿದ್ಯುತ್ ಕಂಬಗಳ ಮೇಲೆ ಬಾಗಿರುವ ಮರ ಗಿಡಗಳ ರೆಂಬೆಗಳನ್ನು ತೆರವುಗೊಳಿಸುವುದ ಬಗ್ಗೆ ಚರ್ಚಿಸಲಾಯಿತು.

ಮೇಲ್ಕಂಡ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಬೊಮ್ಮನಹಳ್ಳಿ ವಲಯ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

4. <u>ಸಹಾಯಕ ಕಾರ್ಯಪಾಲಕ ಅಭಿಯಂತರರು (ಅಂಜನಾಪುರ ಉಪ ವಿಭಾಗ)</u>

ಹಿಂದಿನ ವಾರ್ಡ್ ಸಮಿತಿ ಸಭೆ ನಡವಳಿಗಳ ಬಗ್ಗೆ ತೆಗೆದುಕೊಂಡು ಕ್ರಮಗಳ ವರದಿ ನೀಡುವ ಬಗ್ಗೆ ಸದಸ್ಯರು ಕೋರಿರುತ್ತಾರೆ ಹಾಗೂ ಮಳೆ ಬಂದಾಗ ಶ್ರೇಯಸ್ ಕಾಲೋನಿಯ 11ನೇ ಅಡ್ಡ ರಸ್ತೆಯಲ್ಲಿ ಬೃಹತ್ ನೀರುಗಾಲುವೆ ನೀರು ನುಗ್ಗುವುದು, ಕೊತ್ತನೂರು ಗ್ರಾಮದಲ್ಲಿ ಹೊಸದಾಗಿ ಕಲ್ವರ್ಟ್ ನಿರ್ಮಾಣ ಮಾಡಿ ಚರಂಡಿಗಳಲ್ಲಿ ತುಂಬಿರುವ ಹೂಳು ತೆಗೆಯುವುದು ಹಾಗೂ ಗೌರವನಗರದಲ್ಲಿ ಮಳೆ ನೀರು ಕೊಯ್ಲು ನಿರ್ಮಾಣ ಮಾಡುವುದಾಗಿ ಕೋರಿರುತ್ತಾರೆ.

ಮೇಲ್ಕಂಡ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಅಂಜನಾಪುರ ಉಪ ವಿಭಾಗ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

9.ನೋಡಲ್ ಅಧಿಕಾರಿ:-

ಅದರಂತೆ ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕರಾದ ಶ್ರೀ ಟಿ.ನಟರಾಜ ರವರು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಆದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.195 ಕೋಣನಕುಂಟೆ

-ಸಹಿ-
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.195 ಕೋಣನಕುಂಟೆ

Scanned with CamScanner